(28)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| **ವಿಷಯ:** | ಅನುದಾನಿತ ಐ.ಟಿ.ಐ.ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ ಕಳೆದ ಫೆಬ್ರವರಿ-2020, ಅಕ್ಟೋಬರ್-2020, ನವೆಂಬರ್-2020 ಹಾಗೂ ಡಿಸೆಂಬರ್-2020 ರ ಮಾಹೆಗಳ ವೇತನವನ್ನು ಪಾವತಿಸದೆ ಇರುವುದರಿಂದ ಆರ್ಥಿಕ ಸಂಕಷ್ಟಕ್ಕೀಡಾಗಿರುವ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ. |

* * *

ರಾಜ್ಯದಲ್ಲಿನ ಖಾಸಗಿ ಅನುದಾನಿತ ಐ.ಟಿ.ಐ. ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕಳೆದ ಫೆಬ್ರವರಿ-2020 ರ ಮಾಹೆಯಲ್ಲಿ ಅನುದಾನದ ಕೊರತೆಯಿಂದಾಗಿ ಕೆಲವೊಂದು ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗಳಿಗೆ ಫೆಬ್ರವರಿ-2020 ರ ಮಾಹೆಯ ವೇತನ ಪಾವತಿಸುವುದು ಬಾಕಿ ಉಳಿದಿರುತ್ತದೆ. 2020-21ನೇ ಆರ್ಥಿಕ ವರ್ಷದಲ್ಲಿ 2019-20ನೇ ಆರ್ಥಿಕ ವರ್ಷದ ಬಾಕಿ ವೇತನವನ್ನು ಪಾವತಿಸಲು ಆರ್ಥಿಕ ಇಲಾಖೆಯ ಮಾರ್ಗದರ್ಶನದಂತೆ ಅವಕಾಶಗಳಿರಲಿಲ್ಲ. ತದನಂತರ ವೇತನ ಹಿಂಬಾಕಿಯನ್ನು ಪಾವತಿಸಲು ಕ್ರೋಢೀಕೃತ ಪ್ರಸ್ತಾವನೆಯನ್ನು ಸಲ್ಲಿಸಲು ಆರ್ಥಿಕ ಇಲಾಖೆಯು ಸೂಚನೆ ನೀಡಿದ್ದರ ಮೇರೆಗೆ ಆಯುಕ್ತಾಲಯದಿಂದ ಸ್ವೀಕೃತವಾದ ಪ್ರಸ್ತಾವನೆಯನ್ನು ಆಧರಿಸಿ ಅನುದಾನ ಬಿಡುಗಡೆಗಾಗಿ ಆರ್ಥಿಕ ಇಲಾಖೆಗೆ ಕೋರಲಾಗಿತ್ತು. ಪ್ರಸ್ತುತ ಧನ ಪುನರ್ ವಿನಿಯೋಗದ ಮೂಲಕ ಅನುದಾನ ಹಂಚಿಕೆಯಾಗಿದ್ದು, ಸದರಿ ಲಭ್ಯ ಅನುದಾನವನ್ನು ಬಿಡುಗಡೆಗೊಳಿಸಲು ಕ್ರಮವಹಿಸಲಾಗುತ್ತಿದೆ.

ಪ್ರಸಕ್ತ ಸಾಲಿನಿಂದ ಅಕ್ಟೋಬರ್-2020 ರ ಮಾಹೆಯಿಂದ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ವೇತನಾನುದಾನದ ಬಿಲ್ಲುಗಳಿಗೆ ಮೇಲುಸಹಿ ಮಾಡುವ ಪ್ರಾಧಿಕಾರವನ್ನು ವಿಕೇಂದ್ರೀಕರಣಗೊಳಿಸಿ ವಿಭಾಗೀಯ ಕಛೇರಿಗಳಿಂದ ಆಯಾ ಜಿಲ್ಲೆಗಳ ನೋಡಲ್ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ನೋಡಲ್ ಸಂಸ್ಥೆಯ ಅಧಿಕಾರಿಗಳು ಖಾಸಗಿ ಅನುದಾನಿತ ಸಿಬ್ಬಂದಿಯವರ ವಿವರಗಳನ್ನು ಹೆಚ್.ಆರ್.ಎಂ.ಎಸ್. ಮತ್ತು ಖಜಾನೆ-2 ರಲ್ಲಿ ಮ್ಯಾಪಿಂಗ್ ಮಾಡಿಕೊಳ್ಳಲು ಸಾಕಷ್ಟು ಸಮಯಾವಕಾಶ ಅವಶ್ಯಕತೆ ಇದ್ದುದ್ದರಿಂದ ಅಕ್ಟೋಬರ್-2020, ನವೆಂಬರ್-2020 ಮತ್ತು ಡಿಸೆಂಬರ್-2020 ರ ಮಾಹೆಗಳ ವೇತನವನ್ನು ನಿಗದಿತ ಅವಧಿಯೊಳಗೆ ಪಾವತಿಸಲು ತಾಂತ್ರಿಕ ಕಾರಣಗಳಿಂದ ವಿಳಂಬವಾಗಿತ್ತು. ಪ್ರಸ್ತುತ ಸಂಬಂಧಿಸಿದ ಎಲ್ಲಾ ನೋಡಲ್ ಸಂಸ್ಥೆಗಳಿಗೆ ಅನುದಾನವು ಬಿಡುಗಡೆಯಾಗಿದ್ದು, ವೇತನ ಪಾವತಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

* * * *

**ಕೌಉಜೀಇ 05 ಕೈತಪ್ರ 2021**

(ಡಾ.ಸಿ.ಎನ್.ಅಶ್ವತ್ಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು